**Akashvani : Bangalore**
**Regional Bulletin In Kannada**
**29.03.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**29.03.2025 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ಎಂಎಸ್ಐಎಲ್ ನಿಂದ ವಿವಿಧ ಉತ್ಪನ್ನಗಳ ಮಾರಾಟಕ್ಕೆ ಇ-ಕಾಮರ್ಸ್ ಪೋರ್ಟಲ್ - ಸಚಿವ ಎಂ.ಬಿ ಪಾಟೀಲ್**

**೨. ೧೯ ಸಾವಿರದ ೯೩೦ ಕೋಟಿ ಗಾತ್ರದ ಬಿಬಿಎಂಪಿ ಬಜೆಟ್ ಮಂಡನೆ ; ಘನತ್ಯಾಜ್ಯ ನಿರ್ವಹಣೆಗೂ ಶುಲ್ಕ ವಿಧಿಸಲು ನಿರ್ಧಾರ**

**೩. ಹಾಲು ಸೇರಿದಂತೆ ಬೆಲೆ ಏರಿಕೆ ಖಂಡಿಸಿ ಸರ್ಕಾರದ ವಿರುದ್ಧ ಜನಾಂದೋಲನಕ್ಕೆ ಬಿಜೆಪಿ ನಿರ್ಧಾರ**

**೪. ಹಳ್ಳಿಗಳಲ್ಲಿ ಕುಡಿಯುವ ನೀರು ಸಮಸ್ಯೆ ತಲೆದೋರದಂತೆ ಕ್ರಮವಹಿಸಿ - ಅಧಿಕಾರಿಗಳಿಗೆ ಜಿಲ್ಲಾಡಳಿತಗಳಿಂದ ಸೂಚನೆ**

**<><*<><>*><>**

ಸರ್ಕಾರಿ ಸ್ವಾಮ್ಯದ ಎಂಎಸ್ಐಎಲ್ ತನ್ನ ವಿವಿಧ ಉತ್ಪನ್ನಗಳ ಮಾರಾಟಕ್ಕಾಗಿ ಇ-ಕಾಮರ್ಸ್ ಪೋರ್ಟಲ್ ತೆರೆಯಲು ಸಿದ್ಧತೆ ನಡೆಸಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಜೆಮ್ ಪೋರ್ಟಲ್ ಮಾದರಿಯಲ್ಲಿ ರಾಜ್ಯಸರ್ಕಾರ ಹಾಗೂ ಖಾಸಗಿ ಒಡೆತನದ ಉತ್ಪನ್ನಗಳ ಮಾರಾಟ ಮತ್ತು ಖರೀದಿಗೆ ಇದು ಉತ್ತಮ ವೇದಿಕೆಯಾಗಲಿದೆ ಎಂದು ಹೇಳಿದ್ದಾರೆ. ಈ ಕುರಿತಂತೆ ಎಂಎಸ್ಐಎಲ್‌ನ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದ್ದು, ಯೋಜನೆ ಜಾರಿಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಮೊದಲ ಹಂತದಲ್ಲಿ ಕೇವಲ ಎಂಎಸ್ಐಎಲ್ ಉತ್ಪನ್ನಗಳನ್ನು ಮಾರಾಟ ಮಾಡಲಾಗುವುದು ಎಂದು ವಿವರಿಸಿದ್ದಾರೆ. ೨ನೇ ಹಂತದಲ್ಲಿ ಮೈಸೂರು ಸ್ಯಾಂಡಲ್ ಸೋಪ್, ಲಿಡ್ಕರ್ ಉತ್ಪನ್ನ, ಮೈಸೂರು ರೇಷ್ಮೆ, ಕಾವೇರಿ ಎಂಪೋರಿಯಂ ಉತ್ಪನ್ನ, ನಂದಿನ ಉತ್ಪನ್ನ ಇತ್ಯಾದಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಉತ್ಪನ್ನಗಳನ್ನು ಮಾರಾಟ ಮಾಡಲಾಗುವುದು. ಮಹಿಳಾ ಸ್ವ-ಸಹಾಯ ಸಂಘಗಳು ತಯಾರಿಸಿದ ಉತ್ಪನ್ನಗಳಿಗೂ ವೇದಿಕೆ ಕಲ್ಪಿಸಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ೨೦೨೫-೨೬ನೇ ಸಾಲಿನ ಆಯವ್ಯಯವನ್ನು ಹಣಕಾಸು ವಿಭಾಗದ ವಿಶೇಷ ಆಯುಕ್ತರಾದ ಡಾ. ಹರೀಶ್ ಕುಮಾರ್.ಕೆ ಮಂಡಿಸಿದ್ದಾರೆ. ಈ ಬಾರಿ ೧೯ ಸಾವಿರದ ೯೨೭ ಕೋಟಿ ರೂಪಾಯಿ ಆಯವ್ಯಯ ಮಂಡಿಸಲಾಗಿದೆ. ಚುನಾಯಿತ ಸಮಿತಿ ಇಲ್ಲದೇ ಸತತ ೫ನೇ ಬಾರಿಗೆ ಮಂಡನೆಯಾದ ಆಯವ್ಯಯ ಇದಾಗಿದೆ. ಈ ಬಾರಿಯ ಮುಂಗಡ ಪತ್ರದ ಗಾತ್ರ ಕಳೆದ ಬಾರಿಗಿಂತ ಶೇಕಡ ೫೦ರಷ್ಟು ಹೆಚ್ಚಳವಾಗಿದೆ. ೨೦೨೫-೨೬ನೇ ಸಾಲಿನಿಂದ ಆಸ್ತಿ ತೆರಿಗೆ ಜೊತೆ ಘನತ್ಯಾಜ್ಯ ನಿರ್ವಹಣೆ ಶುಲ್ಕ ವಿಧಿಸುವ

ಪ್ರಸ್ತಾಪ ಬಜೆಟ್‌ನಲ್ಲಿದೆ. ಈ ಬಾರಿ ಬ್ರ್ಯಾಂಡ್ ಬೆಂಗಳೂರಿಗೆ ಒತ್ತು ನೀಡಲಾಗಿದೆ. ಮುಂದಿನ ಎರಡು ವರ್ಷಗಳಲ್ಲಿ ೪೧೩ ಕೋಟಿ ವೆಚ್ಚದಲ್ಲಿ ೧೯ ಆಸ್ಪತ್ರೆಗಳ ಹಾಸಿಗೆಗಳನ್ನು ಒಂದು ಸಾವಿರದ ೧೨೨ಕ್ಕೆ ಹೆಚ್ಚಿಸಲು ನಿರ್ಧರಿಸಲಾಗಿದೆ. ಬೆಂಗಳೂರಿನ ನಗರ ಸಂಚಾರ ದಟ್ಟಣೆ ಸುಗಮಗೊಳಿಸಲು ೮೮೦ ಕೋಟಿ ರೂಪಾಯಿ ಹಂಚಿಕೆ ಮಾಡಲಾಗಿದೆ.

**<><*<><>*><>**

ಹಾಲು, ಪೆಟ್ರೋಲ್, ಡೀಸೆಲ್ ಸೇರಿದಂತೆ ಇನ್ನಿತರ ಬೆಲೆ ಏರಿಕೆ ವಿರೋಧಿಸಿ ರಾಜ್ಯ ಸರ್ಕಾರದ ವಿರುದ್ಧ ಬೃಹತ್ ಜನಾಂದೋಲನ ನಡೆಸಲು ಬಿಜೆಪಿ ನಿರ್ಧರಿಸಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಗಳೂರಿನಲ್ಲಿಂದು ತಿಳಿಸಿದ್ದಾರೆ. ಏಪ್ರಿಲ್ ೨ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅಹೋ ರಾತ್ರಿ ಧರಣಿ ಆರಂಭಿಸಲು ಪಕ್ಷದ ನಾಯಕರ ಸಭೆಯಲ್ಲಿ ನಿರ್ಧರಿಸಲಾಗಿದೆ. ಈ ಧರಣಿಯಲ್ಲಿ ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಾಜಿ ಶಾಸಕರು, ಸೇರಿದಂತೆ ಹಲವು ಮುಖಂಡರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಇದೇ ವೇಳೆ ಬಿಜೆಪಿಯ ೧೮ ಶಾಸಕರನ್ನು ವಿಧಾನಸಭೆ ಕಲಾಪದಿಂದ ೬ ತಿಂಗಳ ಕಾಲ ಅಮಾನತು ಮಾಡಿರುವ ವಿಧಾನಸಭಾಧ್ಯಕ್ಷರ ನಡೆ ಅಸಂವಿಧಾನಿಕ ಎಂದು ಅವರು ತಿಳಿಸಿದ್ದಾರೆ. ಇದನ್ನು ವಿರೋಧಿಸಿ ಏಪ್ರಿಲ್ ೨ರಂದು ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ಪಕ್ಷದ ಶಾಸಕರು, ವಿಧಾನ ಪರಿಷತ್ ಸದಸ್ಯರು ಪ್ರತಿಭಟನೆ ನಡೆಸಲಿದ್ದು, ಸ್ಪೀಕರ್ ತಮ್ಮ ನಿರ್ಧಾರವನ್ನು ಕೂಡಲೇ ಹಿಂಪಡೆಯಬೇಕು ಎಂದು ಅವರು ಒತ್ತಾಯಿಸಿದ್ದಾರೆ.

**<><*<><>*><>**

ರಾಜ್ಯ ಸರ್ಕಾರ ಆರ್ಥಿಕ ದಿವಾಳಿಯಾಗಿದ್ದು, ಆಡಳಿತ ನಿಯಂತ್ರಣ ಕಳೆದುಕೊಂಡಿದೆ ಎಂದು ಸಂಸದ ಜಗದೀಶ್ ಶೆಟ್ಟರ್ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಲಿನ ದರ ಏರಿಸುವ ಬದಲು ಸರ್ಕಾರದ ಖಜಾನೆಯಿಂದಲೇ ನೇರವಾಗಿ ರೈತರಿಗೆ ಸಂದಾಯ ಮಾಡಲಿ ಎಂದು ಹೇಳಿದ್ದಾರೆ. ಇದೇ ವೇಳೆ ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಇದು ಹೈಕಮಾಂಡ್ ನಿರ್ಧಾರ ಎಂದು ಪ್ರತಿಕ್ರಿಯಿಸಿದ್ದಾರೆ.

**ಧ್ವನಿ : ಜಗದೀಶ್ ಶೆಟ್ಟರ್ (೨೮ ಸೆಕೆಂಡ್‌ಗಳು)**

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ.

**<><*<><>*><>**

ಏಪ್ರಿಲ್ ೧ ರಿಂದ ಹಾಲಿನ ದರ ೪ ರೂಪಾಯಿ ಹೆಚ್ಚಳ ಮಾಡಲಾಗಿದ್ದು, ಈ ಹಣವನ್ನು ನೇರವಾಗಿ ರೈತರಿಗೆ ನೀಡಲಾಗುವುದು ಎಂದು ಕೆಎಂಎಫ್ ಅಧ್ಯಕ್ಷ ಭೀಮಾನಾಯ್ಕ್ ಸ್ಪಷ್ಟಪಡಿಸಿದ್ದಾರೆ. ಬಳ್ಳಾರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಲಿನ ದರ ಏರಿಕೆಯ ಹಣವನ್ನು ರೈತರಿಗೆ ನೀಡಲಾಗುವುದು

ಎಂದು ತಿಳಿಸಿದ್ದಾರೆ. ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರು, ತಮ್ಮ ಆಡಳಿತ ಅವಧಿಯನ್ನು ಪೂರ್ಣಗೊಳಿಸಲಿದ್ದಾರೆ ಎಂದು ಅವರು ಹೇಳಿದ್ದಾರೆ. ಇದೇ ವೇಳೆ ಬಸನಗೌಡ ಪಾಟೀಲ್ ಯತ್ನಾಳ್, ಕಾಂಗ್ರೆಸ್‌ಗೆ ಬಂದರೆ ವೈಯಕ್ತಿಕವಾಗಿ ಸ್ವಾಗತಿಸುವುದಾಗಿ ತಿಳಿಸಿದ್ದಾರೆ.

**<><*<><>*><>**

ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರು ಸಮಸ್ಯೆ ತಲೆದೋರದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೇಸಿಗೆ ಮುನ್ನೆಚ್ಚರಿಕೆ ಕ್ರಮವಾಗಿ ಕುಡಿಯುವ ನೀರು, ಮೇವು ಪರಿಸ್ಥಿತಿ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಬೇಸಿಗೆ ಈಗಾಗಲೇ ಪ್ರಾರಂಭವಾಗಿದ್ದು, ಕುಡಿಯುವ ನೀರಿಗೆ ಸಂಬಂಧಿಸಿದಂತೆ ಬಹಳ ಎಚ್ಚರಿಕೆಯಿಂದ ಜವಾಬ್ದಾರಿಯನ್ನು ನಿರ್ವಹಣೆ ಮಾಡಬೇಕು. ತಹಶೀಲ್ದಾರ್‌ಗಳು ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು ತುರ್ತಾಗಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಭೆ ನಡೆಸಿ, ಪ್ರತಿ ಗ್ರಾಮವಾರು ಮಾಹಿತಿ ಪಡೆಯಬೇಕು ಎಂದು ತಿಳಿಸಿದ್ದಾರೆ. ಇನ್ನೊಂದೆಡೆ ಬಾಗಲಕೋಟೆ ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ತಾಪಮಾನ ಹೆಚ್ಚುತ್ತಿದ್ದು, ಕುಡಿಯುವ ನೀರಿನ ಪೂರೈಕೆಯಲ್ಲಿ ಕೊರತೆಯಾಗದಂತೆ ನಿಗಾವಹಿಸಲು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಜಿಲ್ಲೆಯಲ್ಲಿ ಯಾವುದೇ ಕಾರಣಕ್ಕೂ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಆಗದಂತೆ ಮುಂಜಾಗ್ರತಾ ಕ್ರಮವಹಿಸಬೇಕು. ಅಧಿಕಾರಿಗಳು ಗ್ರಾಮಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕೆಂದು ನಿರ್ದೇಶನ ನೀಡಿದ್ದಾರೆ.

**<><*<><>*><>**

ಮಂಡ್ಯ ಜಿಲ್ಲೆಯಲ್ಲಿರುವ ಯಾವುದೇ ಕೆರೆಕಟ್ಟೆಗಳನ್ನು ಯಾರೂ ಅತಿಕ್ರಮಣ ಮಾಡದಂತೆ ಕ್ರಮವಹಿಸಿ ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ವಿ.ಅನ್ಬುಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕೆಡಿಪಿ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಯಾವುದೇ ರೀತಿಯ ಸಮಸ್ಯೆ ಇಲ್ಲ, ಕೃಷ್ಣರಾಜಸಾಗರ ಅಣೆಕಟ್ಟೆನಲ್ಲಿ ಪ್ರಸ್ತುತ ೧೦೭ ಅಡಿ ನೀರು ಸಂಗ್ರಹವಾಗಿದೆ ಎಂದು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ೬೭೮ ಕೆರೆಗಳಿದ್ದು ಅದರಲ್ಲಿ ೨೩೨ ಕೆರೆಗಳು ಶೇಕಡ ೧೦೦ ರಷ್ಟು ಭರ್ತಿಯಾಗಿವೆ. ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸದಂತೆ ಈಗಾಗಲೇ ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ಸಹಕಾರ ಸಚಿವ ಕೆ.ಎನ್. ರಾಜಣ್ಣ ಪುತ್ರ ರಾಜೇಂದ್ರ ಹತ್ಯೆಗೆ ಸಂಚು ರೂಪಿಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪೊಲೀಸರು ಐದು ಜನರ ವಿರುದ್ಧ ಎಫ್‌ಐಆರ್ ದಾಖಲಿಸುವ ಮೂಲಕ ತನಿಖೆ ಆರಂಭಿಸಿದ್ದಾರೆ. ತಮ್ಮನ್ನು ರಾಜಕೀಯವಾಗಿ ಮುಗಿಸಲು ಸಂಚು ರೂಪಿಸಲಾಗುತ್ತಿದೆ ಎಂದು ವಿಧಾನಪರಿಷತ್ ಸದಸ್ಯ ರಾಜೇಂದ್ರ ಪೊಲೀಸರಿಗೆ ದೂರು ನೀಡಿದರು. ಈ ನಡುವೆ ಸಚಿವ ರಾಜಣ್ಣ ದೂರು ನೀಡಿರುವ ಹನಿ ಟ್ರ್ಯಾಪ್ ಯತ್ನ ಪ್ರಕರಣದ ತನಿಖೆಯನ್ನು ಸಿಐಡಿ ಪೊಲೀಸರು ಪ್ರಾರಂಭಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯದ ದಕ್ಷಿಣ ಒಳನಾಡು ಮತ್ತು ಕರಾವಳಿ ಕರ್ನಾಟಕದ ಪ್ರತ್ಯೇಕ ಸ್ಥಳಗಳಲ್ಲಿ ಮಳೆಯಾಗಿದೆ. ದಕ್ಷಿಣಕನ್ನಡ, ಕೊಡಗು, ಹಾಸನ, ಮೈಸೂರು ಜಿಲ್ಲೆಗಳಲ್ಲಿ ಪ್ರತ್ಯೇಕ ಸ್ಥಳಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ ಎಂದು

ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ರಾಜ್ಯದ ಉಳಿದ ಭಾಗಗಳಲ್ಲಿ ಒಣಹವೆ ಇರಲಿದೆ. ಅತಿ ಹೆಚ್ಚು ಉಷ್ಣಾಂಶ ೪೧ ಡಿಗ್ರಿ ಸೆಲ್ಸಿಯೆಸ್ ಕಲಬುರಗಿಯಲ್ಲಿ ದಾಖಲಾಗಿದೆ. ಬೆಂಗಳೂರು ಸುತ್ತಮುತ್ತ ಶುಭ್ರ ಆಕಾಶ. ಗರಿಷ್ಠ ೩೫, ಕನಿಷ್ಠ ೨೨ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು-೧

೧. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಪ್ರಸ್ತಾವನೆ ಮೇರೆಗೆ ಎನ್.ಟಿ.ಪಿ.ಸಿ ಕಂಪನಿಯ ಸಿಎಸ್ಆರ್‌ಯಡಿ ಧಾರವಾಡ ಜಿಲ್ಲೆಯ ನವಲಗುಂದ ವಿಧಾನಸಭಾ ಕ್ಷೇತ್ರದ ಶಾಲೆಗಳಿಗೆ ವಿಧಾನಪರಿಷತ್ ಸದಸ್ಯ ಎಸ್.ವಿ.ಸಂಕನೂರ ಡೆಸ್ಕ್ ವಿತರಣೆ ಮಾಡಿದರು.

೨. ಬೆಂಗಳೂರು ನಗರ ವಿಶ್ವವಿದ್ಯಾಲಯ ಘಟಕ ಮಹಿಳಾ ಮಹಾ ವಿದ್ಯಾಲಯದಲ್ಲಿ ಮಹಿಳಾ ದಿನಾಚರಣೆ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಮಾತನಾಡಿದ ಬೆಂಗಳೂರು ನಗರ ವಿವಿ ಕುಲಪತಿ ಪ್ರೋಫೆಸರ್ ಲಿಂಗರಾಜು ಗಾಂಧಿ, ಮಹಿಳಾ ಶಿಕ್ಷಣ ಮತ್ತು ಸಬಲೀಕರಣಕ್ಕೆ ವಿಶೇಷ ಒತ್ತು ನೀಡಬೇಕೆಂದು ತಿಳಿಸಿದರು.

೩. ಕೇಂದ್ರ ಸರ್ಕಾರದ ಆದೇಶದ ಅನ್ವಯ ಬೆಳಕು ಹಾಗೂ ಬುಲ್ ಟ್ರಾಲ್ ಮೀನುಗಾರಿಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಆದರೂ ನಿಯಮ ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಜರುಗಿಸಲು ನಿರ್ದೇಶನ ನೀಡಲಾಗಿದೆ ಎಂದು ಉಡುಪಿ ಮೀನುಗಾರಿಕೆ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**